**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆಃ 1040/2021**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರುಃ**

1. ಕೇಶವಪ್ರಸಾದ ಉಃ ಕೇಶವ ಬಿನ್ ಲೇಟ್ ಚನ್ನಯ್ಯ,
39 ವರ್ಷ ವಯಸ್ಸು,
2. ಮಂಜುನಾಥ ಸಿ.ಸಿ. ಉಃ ಅಜಿತ ಬಿನ್ ಲೇಟ್ ಚನ್ನಯ್ಯ,
37 ವರ್ಷ ವಯಸ್ಸು,

ಇಬ್ಬರೂ ವಾಸಃ ತಗ್ಯಮ್ಮ ಬಡಾವಣೆ,
ಮೈಸೂರು ರಸ್ತೆ,
ಚನ್ನರಾಯಪಟ್ಟಣ ಟೌನ್, ಹಾಸನ.

**ದೋಷಾರೋಪಣೆ**

**ದೀಪು ಬಿ.ಸಿ.**, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕಃ 25.03.2021 ರಂದು ಬೆಳಗ್ಗೆ 7.40 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ತಗ್ಯಮ್ಮ ಬಡಾವಣೆಯಲ್ಲಿ ಸಾಕ್ಷಿ.1 ರವರು ಆರೋಪಿಗಳಾದ ನಿಮ್ಮ ಮನೆ ಹತ್ತಿರ ಸಿಮೆಂಟ್ ರಸ್ತೆಯಲ್ಲಿ ನಿಂತು ನಿಮ್ಮ ಬೋರ್ವೆಲ್ ವೈರನ್ನು ತೆಗೆದುಕೊಳ್ಳಿ ನಾನು ಅಲ್ಲಿ ಸ್ವಚ್ಚ ಮಾಡಿ ಬೆಂಕಿ ಹಾಕಬೇಕು ಎಂದು ಹೇಳಿದ್ದಕ್ಕೆ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಸಾಕ್ಷಿ.1 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಬೋಳಿ ಮಗನೆ, ಸೂಳೆ ಮಗನೆ ಯಾಕೋ ವೈರ್ ತೆಗೆಯಬೇಕು ಎಂದು ಅವಾಚ್ಯ

ಶಬ್ದಗಳಿಂದು ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

2) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, ನಿಮ್ಮ ಸ್ವ ಇಚ್ಛೆಯಿಂದ ಕೈಗಳಿಂದ ಸಾಕ್ಷಿ.1 ರವರ ಮೈಕೈಗೆ ಹೊಡೆದು ಕೆಳಗೆ ಬೀಳಿಸಿ, 2 ನೇ ಆರೋಪಿಯಾದ ನೀವು ಕಾಲುಗಳಿಂದ ಸಾಕ್ಷಿ.1 ರವರ ಎದೆ, ಹೊಟ್ಟೆ, ಎರಡು ತೊಡೆ ಮತ್ತು ಮೈಕೈಗೆ ತುಳಿದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

3) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿಯಾದ ನೀವು ನಿಮ್ಮ ಸ್ವ ಇಚ್ಛೆಯಿಂದ ಮಾರಕಾಯುಧವಾದ ಕಬ್ಬಿಣದ ರಾಡಿನಿಂದ ಸಾಕ್ಷಿ.1 ರವರ ತಲೆಯ ಬಲಭಾಗಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 324 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

4) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು, ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ರವರಿಗೆ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟುಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

ದಿನಾಂಕಃ **29.08.2023**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ</u>**

**<u>ಸಿಸಿ ಸಂಖ್ಯೆ: 1040/2021</u>**

**<u>ಪಿರ್ಯಾದಿದಾರರು:</u>** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**<u>ಆರೋಪಿತರು:</u>** 1. ಕೇಶವಪ್ರಸಾದ ಉ: ಕೇಶವ ಬಿನ್ ಲೇಟ್ ಚನ್ನಯ್ಯ,
39 ವರ್ಷ ವಯಸ್ಸು,
ವಾಸ: ತಗ್ಯಮ್ಮ ಬಡಾವಣೆ,
ಮೈಸೂರು ರಸ್ತೆ, ಚನ್ನರಾಯಪಟ್ಟಣ ಟೌನ್, ಹಾಸನ.

**<u>ದೋಷಾರೋಪಣೆ</u>**

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಉತ್ತರ: ಅರ್ಥವಾಯಿತು

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರ: ವಿಚಾರಣೆಯಾಗಬೇಕು

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕ: **29.08.2023**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 1040/2021**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರು:** 2. ಮಂಜುನಾಥ ಸಿ.ಸಿ. ಉಃ ಅಜಿತ ಬಿನ್ ಲೇಟ್ ಚನ್ನಯ್ಯ,
37 ವರ್ಷ ವಯಸ್ಸು,
ಇಬ್ಬರೂ ವಾಸಃ ತಗ್ಯಮ್ಮ ಬಡಾವಣೆ,
ಮೈಸೂರು ರಸ್ತೆ, ಚನ್ನರಾಯಪಟ್ಟಣ ಟೌನ್, ಹಾಸನ.

**ದೋಷಾರೋಪಣೆ**

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಉತ್ತರಃ ಅರ್ಥವಾಯಿತು

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರಃ ವಿಚಾರಣೆಯಾಗಬೇಕು

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **29.08.2023**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.